ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂ: ಡಿಟಿಇ 55 ಇಎಸ್‌ಟಿ (10) 2019-20

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560001.
ದಿನಾಂಕ: 15-01-2020

**ಸುತ್ತೋಲೆ**

ವಿಷಯ: ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿನ ಸರ್ಕಾರಿ ಮತ್ತು ಅನುದಾನಿತ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧನಾ ಸಿಬ್ಬಂದಿಗಳು ತಾಂತ್ರಿಕ ಕೋರ್ಸುಗಳ ಶಿಕ್ಷಣವನ್ನು ದೂರ ಶಿಕ್ಷಣ ಮತ್ತು ಮುಕ್ತ ವಿಶ್ವಾವಿದ್ಯಾಲಯದಿಂದ ಪಡೆದಿರುವ ಬಗ್ಗೆ.

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ: ಇಡಿ 177 ಡಿಟಿಇ 2019, ದಿ: 27.11.2019

***-*-***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ಸರ್ವೋಚ್ಚ ನ್ಯಾಯಾಲಯವು ದಿ: 30.11.2017 ರಂದು Orissa Lift Irrigation Corporation Ltd V/s Rabi sankar Patro and Ors (2018 1 SSC 468 ರ ಪ್ರಕರಣದ ತೀರ್ಪಿನ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಸೂಕ್ತ ಪ್ರಾಧಿಕಾರದಿಂದ ಮಾನ್ಯತೆ ಪಡೆಯದೆ ನಡೆಸಿರುವ ಮುಕ್ತ ವಿಶ್ವವಿದ್ಯಾಲಯ / ದೂರ ಶಿಕ್ಷಣದ ಸಂಸ್ಥೆಗಳ ಮೂಲಕ ಇಂಜಿನಿಯರಿಂಗ್ ಪದವಿ / ಡಿಪ್ಲೋಮೊ ಪದವಿಗಳನ್ನು ಪಡೆದು ತದನಂತರ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿನ ಅಧ್ಯಾಪಕರುಗಳ ವೃಂದದಲ್ಲಿ ಆಯ್ಕೆ ಹೊಂದಿ ಕಾರ್ಯನಿರ್ವಹಿಸುತ್ತಿರುವರೆ, ಕಾರ್ಯನಿರ್ವಹಿಸುತ್ತಿದ್ದಲ್ಲಿ, ಅಂತಹ ಅಧ್ಯಾಪಕರುಗಳು ಹೊಂದಿರುವ ಪದವಿಗಳ ವಿವರ ಮತ್ತು ಸಂಸ್ಥೆಗಳ ವಿವರ ಸಲ್ಲಿಸುವುದು ಹಾಗೂ ಸೂಕ್ತ ಪ್ರಾಧಿಕಾರದ ಅನುಮತಿ ಪಡೆಯದ ಸಂಸ್ಥೆಗಳಲ್ಲಿ ಪದವಿ ಪಡೆದು ಆಯ್ಕೆ ಹೊಂದಿದ ಸಿಬ್ಬಂದಿಗಳ ಸಂಬಂಧದಲ್ಲಿ ಮಾನ್ಯ ನ್ಯಾಯಾಲಯಗಳ ನಿರ್ದೇಶನವಿದ್ದಲ್ಲಿ ಅಂತಹ ಮಾಹಿತಿಯನ್ನು ಸಲ್ಲಿಸುವಂತೆ ಉಲ್ಲೇಖಿತ ಸರ್ಕಾರದ ಪತ್ರದಲ್ಲಿ ಸೂಚಿಸಲಾಗಿರುತ್ತದೆ.

ಆದ್ದರಿಂದ ಸಂಬಂಧಪಟ್ಟ ಸೂಕ್ತ ಪ್ರಾಧಿಕಾರದಿಂದ ಮಾನ್ಯತೆ ಪಡೆಯದೆ ನಡೆಸಿರುವ ಮುಕ್ತ ವಿಶ್ವವಿದ್ಯಾಲಯ / ದೂರ ಶಿಕ್ಷಣದ ಸಂಸ್ಥೆಗಳ ಮೂಲಕ ಇಂಜಿನಿಯರಿಂಗ್ ಪದವಿ / ಡಿಪ್ಲೋಮೊ ಪದವಿಗಳನ್ನು ಪಡೆದು ತದನಂತರ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿನ ಅಧ್ಯಾಪಕರುಗಳ ವೃಂದದಲ್ಲಿ ಆಯ್ಕೆ ಹೊಂದಿ ಕಾರ್ಯನಿರ್ವಹಿಸುತ್ತಿದ್ದಲ್ಲಿ ಅಂತಹ ಅಧ್ಯಾಪಕರುಗಳ ಮಾಹಿತಿಯನ್ನು ಈ Google Form ಲಿಂಕ್ https://forms.gle/ERzmp7pnFg5bZZUNA ಮೂಲಕ ದಿ:27.01.2020 ರೊಳಗಾಗಿ ಆದ್ಯತೆ ಮೇರೆಗೆ ಮಾಹಿತಿಯನ್ನು ಒದಗಿಸುವಂತೆ ಸೂಚಿಸಲಾಗಿದೆ.

ಆಯಾ ಸಂಸ್ಥೆಯ ಪ್ರಾಂಶುಪಾಲರು ಅಧ್ಯಾಪಕರುಗಳ ಮಾಹಿತಿಯನ್ನು ಅಪ್‌ಲೋಡ್ ಮಾಡುವ ಮುನ್ನ ಖುದ್ದಾಗಿ ಪರಿಶೀಲಿಸಿ ಅಪ್‌ಲೋಡ್ ಮಾಡಲು ಅನುಮೋದನೆ ನೀಡಲು ಸೂಚಿಸಿದೆ. ನಂತರ ಅಪ್‌ಲೋಡ್ ಮಾಡಿದ ಮಾಹಿತಿಯನ್ನು ಅಗತ್ಯ ದಾಖಲೆಗಳೊಂದಿಗೆ ದೃಢೀಕರಿಸಿ ನಿರ್ದೇಶನಾಲಯಕ್ಕೆ ಸಲ್ಲಿಸಲು ಸೂಚಿಸಲಾಗಿದೆ. ಸ್ವೀಕೃತವಾದ ಮಾಹಿತಿಯಲ್ಲಿ ಯಾವುದೇ ಲೋಪದೋಷಗಳು ಕಂಡುಬಂದಲ್ಲಿ ಪ್ರಾಂಶುಪಾಲರು ಮತ್ತು ಸಿಬ್ಬಂದಿಗಳನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಸೂಚಿಸಿದೆ.

**Link to send the details**

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ

**ಸೂಚನೆ:** ಮೇಲ್ಕಂಡ Google Form ನಲ್ಲಿ ಯಾವುದೇ ಬದಲಾವಣೆ, ಮಾರ್ಪಾಡು ಮತ್ತು ಸೇರ್ಪಡೆಗೆ ಸಂಬಂಧಿಸಿದಂತೆ harshadte@gmail.com ಗೆ ಇ-ಮೇಲ್ ಮಾಡಲು ಸೂಚಿಸಿದೆ.

**ಇವರಿಗೆ :-**

1. ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಅಧಿಕಾರಿ/ಸಿಬ್ಬಂದಿ ವರ್ಗದವರಿಗೆ.
2. ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಪಾಲಿಟೆಕ್ನಿಕ್ ಮತ್ತು ಕಿರಿಯ ತಾಂತ್ರಿಕ ಶಾಲೆಗಳ ಸಿಬ್ಬಂದಿಗಳಿಗೆ (ಪ್ರಾಚಾರ್ಯರ ಮೂಲಕ)
3. ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು (ಇಲಾಖೆಯ ವೆಬ್‌ಸೈಟ್ ನಲ್ಲಿ ಪ್ರಚುರಪಡಿಸಲು)